ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಪಪ್ರ : ಸುಮಪ : 2019–20 ದಿನಾಂಕ: 25–10–2019

# ಪತ್ರಿಕಾ ಆಮಂತ್ರಣ

1. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಕೃಷಿ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ ಪಶು ಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ, ಮತ್ತು ಪಂಚಾಯತ್ ರಾಜ್ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ "ಕೃಷಿಮೇಳ – 2019" ಪ್ರಶಸ್ತಿ ಪ್ರದಾನ ಸಮಾರಂಭ

ಗೌರವಾನ್ವಿತ ಅತಿಥಿಗಳು:

ಡಾ ಸಿ. ಎನ್. ಅಶ್ವಥ್ ನಾರಾಯಣ,
ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ,
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಅಧ್ಯಕ್ಷತೆ:

ಎಸ್. ರಾಜೇಂದ್ರ ಪ್ರಸಾದ್,
ಕುಲಪತಿಗಳು, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ,

ದಿನಾಂಕ : 26–11–2019 ಶನಿವಾರ, ಸಮಯ: ಮಧ್ಯಾಹ್ನ 2–00 ಗಂಟೆಗೆ
ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಪ್ರಾಂಗಣ, ಬೆಂಗಳೂರು.

ವಿ.ಸೂ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದೆ. ಕೃಷಿ ವಿಶ್ವವಿದ್ಯಾನಿಲಯದ ವಾಹನವು ಅಂದು ಬೆಳಿಗ್ಗೆ 10–30 ಗಂಟೆಗೆ ನಗರದ ಕಬ್ಬನ್ ಉದ್ಯಾನದಲ್ಲಿರುವ ಪ್ರೆಸ್ ಕ್ಲಬ್ ಆಫ್ ಬೆಂಗಳೂರು ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: ಡಾ ಕೆ. ಶಿವರಾಮು ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾ ತಜ್ಞರು
ಮೊಬೈಲ್ ಸಂಖ್ಯೆ : 99720 35456
ಡಾ ಎಂ. ಎ. ಮೂರ್ತಿ, ಸಹಾಯಕ ಪ್ರಾಧ್ಯಾಪಕರು (ಗುತ್ತಿಗೆ)

ಮೊಬೈಲ್ ಸಂಖ್ಯೆ : 95353 55329
ಶ್ರೀ ಶ್ರೀನಿವಾಸಪ್ಪ, ವಾಹನ ಚಾಲಕರು
ಮೊಬೈಲ್ ಸಂಖ್ಯೆ : 94494 93146

2. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಕೃಷಿ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ ಪಶು ಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ, ಮತ್ತು ಪಂಚಾಯತ್ ರಾಜ್ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ "ಕೃಷಿಮೇಳ – 2019" ಸಮಾರೋಪ ಸಮಾರಂಭ"

ಗೌರವಾನ್ವಿತ ಅತಿಥಿಗಳು:

ಗೋವಿಂದ ಎಂ. ಕಾರಜೋಳ,
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ಅಧ್ಯಕ್ಷತೆ:

ಎಸ್. ರಾಜೇಂದ್ರ ಪ್ರಸಾದ್,
ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ದಿನಾಂಕ: 27–11–2019 ಭಾನುವಾರ, ಸಮಯ: ಬೆಳಿಗ್ಗೆ 11–30 ಗಂಟೆಗೆ
ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಪ್ರಾಂಗಣ, ಬೆಂಗಳೂರು.

ವಿ.ಸೂ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 10–30 ಗಂಟೆಗೆ ನಗರದ ಕಬ್ಬನ್ ಉದ್ಯಾನದಲ್ಲಿರುವ ಬೆಂಗಳೂರು ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು
ಮೊಬೈಲ್ ಸಂಖ್ಯೆ : 99720 35456
ಡಾ. ಎಂ.ಎ. ಮೂರ್ತಿ, ಸಹಾಯಕ ಪ್ರಾಧ್ಯಾಪಕರು (ಗುತ್ತಿಗೆ)
ಮೊಬೈಲ್ ಸಂಖ್ಯೆ : 95353 55329
ಶ್ರೀ ಶ್ರೀನಿವಾಸಪ್ಪ, ವಾಹನ ಚಾಲಕರು
ಮೊಬೈಲ್ ಸಂಖ್ಯೆ : 94494 93146

## SPECIAL MEDIA INVITATION

**The Minister for Tourism, Kannada and Culture Mr C. T. Ravi will be participating as Chief Guest on the eve of its Inaugural flight of the Ethiopian Airlines - one of the major carriers of Africa - between Bengaluru to their base and Capital City of Ethiopia Addis Ababa on October 28 at 7-30 P M at Mysore Hall, Hotel I T C Gardenia on Residency Road.**

**The Ambassador of Ethiopia in India Mr Tizita Mulugeta and the Regional Director of the Ethiopian Airlines for Indian Sub-Continent Mr Tedesse Tilahun are also scheduled to participate in this special function.**

**The Inaugural Flight of the Ethiopian Airlines, the National Airlines of Ethiopia, from Addis Ababa will arrive in Bengaluru on October 28 at 8-00 A M along with the top brass of the airlines accompanying the passengers. The first flight from Bengaluru to Addis Ababa will take-off on the wee-hours of October 29.**

**The introduction of this direct flight between these two destinations will not merely boost Business and Trade, but also expected to boost the Tourism - especially the Health Tourism, as Bengaluru is recognized as a destination for the Best Medical Facilities.**

**Media Persons, representing Electronic and Print Media, are requested to kindly attend and give wide coverage to this special function.**

**D. P. MURALIDHAR**
**DEPUTY DIRECTOR (NEWS)**

**2. ಜಾಗೃತಿ ಅರಿವು ಸಪ್ತಾಹ – 2019 ಪ್ರತಿಜ್ಞಾ ವಚನ ಕಾರ್ಯಕ್ರಮ :**

**ದಿನಾಂಕ : 28–10–2019 ಸೋಮವಾರ ಬೆಳಿಗ್ಗೆ 10–45 ಗಂಟೆಗೆ**
**ಸ್ಥಳ : ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನ ಸೌಧ ಬೆಂಗಳೂರು**

**3. ಸಕಾಲ ಯೋಜನೆ ಸೆಪ್ಟೆಂಬರ್ –2019 ರ ಮಾಹೆಯ ವರದಿ ಬಿಡುಗಡೆ :**
**ಶ್ರೀ ಎಸ್. ಸುರೇಶ್‌ಕುಮಾರ್,**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**

ದಿನಾಂಕ: 28-11-2019 ಸೋಮವಾರ ಬೆಳಿಗ್ಗೆ 11-00 ಗಂಟೆಗೆ
ಸ್ಥಳ : ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನ ಸೌಧ ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಕೌಶಲ್ಯಾಭಿವೃದ್ಧಿ ತರಬೇತಿ

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)

ಜೈವಿಕ ಡೀಸೆಲ್ ( ಬಯೋಡೀಸೆಲ್ ) ಉತ್ಪಾದನೆ ಹಾಗೂ ಉದ್ಯಮದಲ್ಲಿ ಆಸಕ್ತಿ ಹೊಂದಿರುವ ಯುವಕ-ಯುವತಿಯರಿಗೆ ನಗರದ ಜಕ್ಕೂರು ಬಡಾವಣೆಯಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ನವೆಂಬರ್ 25 ರಿಂದ ಆರು ದಿನಗಳ ಉದ್ಯಮ-ಸ್ನೇಹಿ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಆಯೋಜಿಸಲಾಗಿದೆ.

ಹತ್ತನೇ ತರಗತಿಯಲ್ಲಿ ತೇರ್ಗಡೆ ಹೊಂದಿರುವ ಕನಿಷ್ಟ 18 ವರ್ಷದಿಂದ ರಿಂದ ಗರಿಷ್ಟ 40 ವರ್ಷ ವಯೋಮಾನದೊಳಗಿನ ಯುವಕ-ಯುವತಿಯರು ಈ ತರಬೇತಿಗೆ ಅರ್ಹರಾಗಿರುತ್ತಾರೆ. ತರಬೇತಿಗೆ ಆಯ್ಕೆಯಾಗುವ ಎಲ್ಲಾ ಅಭ್ಯರ್ಥಿಗಳಿಗೂ ಉಚಿತ ಊಟ ಮತ್ತು ವಸತಿ ವ್ಯವಸ್ಥೆ ಇರುತ್ತದೆ.

ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳನ್ನು **www.mgired.kar.nic.in** ವೆಬ್‌ಸೈಟ್‌ನಿಂದ ಪಡೆದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಶ್ರೀರಾಮಪುರ ಕ್ರಾಸ್, ಜಕ್ಕೂರು, ಬೆಂಗಳೂರು – 560 064 ಇವರಿಗೆ ನವೆಂಬರ್ 20 ರೊಳಗೆ ಸಲ್ಲಿಸಬಹುದಾಗಿದೆ. ಭರ್ತಿಮಾಡಿದ ಅರ್ಜಿಗಳನ್ನು ಅಂಚೆಯ ಮೂಲಕ ಅಥವಾ ಇ-ಮೇಲ್ : **pschairmanbiofuels@gmail.com** ಮೂಲಕವೂ ಸಲ್ಲಿಸಬಹುದಾಗಿದೆ. ಈ ತರಬೇತಿಗೆ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಮೊಬೈಲ್ ಅಥವಾ ಇ-ಮೇಲ್ ಮೂಲಕ ಮಾಹಿತಿಯನ್ನು ನೀಡಲಾಗುವುದು. ತರಬೇತಿಗೆ ಆಯ್ಕೆಗೊಂಡ ಅಭ್ಯರ್ಥಿಗಳು ತಮ್ಮ ಪ್ರಯಾಣ ವೆಚ್ಚವನ್ನು ಸ್ವಂತವಾಗಿ

ಭರಿಸಬೇಕಾಗುತ್ತದೆ. ಮೊದಲು ಬಂದವರಿಗೆ ಮೊದಲು ಆಧಾರದ ಮೇರೆಗೆ ಈ ತರಬೇತಿಗೆ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 25 ( ಕರ್ನಾಟಕ ವಾರ್ತೆ ) :

ಮಾರ್ಚ್ ಹಾಗೂ ಏಪ್ರಿಲ್-2020ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳ (**CCERF**), ಖಾಸಗಿ ಅಭ್ಯರ್ಥಿಗಳ (**CCEPF**) ಮತ್ತು ಪುನರಾವರ್ತಿತ ಅಭ್ಯರ್ಥಿಗಳ (**CCERR, CCEPR, NSR** ಮತ್ತು **NSPR**) ವಿವರಗಳನ್ನು ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ಅಪ್‌ಲೋಡ್ ಮಾಡಲು, ಖಾಸಗಿ ಅಭ್ಯರ್ಥಿಗಳ ನೊಂದಣಿ ಮಾಡಲು ಮತ್ತು ಶಾಲಾ ಸಂಕೇತ ಪಡೆಯುವ ದಿನಾಂಕಗಳನ್ನು ವಿಸ್ತರಿಸಲಾಗಿದೆ.

ಅಂತೆಯೇ, 2020ರ ಮಾರ್ಚ್ ಮತ್ತು ಏಪ್ರಿಲ್ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳನ್ನು ಶಾಲಾ ಮುಖ್ಯ ಶಿಕ್ಷಕರು ನೋಂದಣಿ ಮಾಡಿಕೊಳ್ಳಲು ಅಕ್ಟೋಬರ್ 31 ಹಾಗೂ 100 ರೂ ದಂಡ ಶುಲ್ಕ ಸಹಿತ ನವೆಂಬರ್ 11 ಕೊನೆಯ ದಿನಾಂಕವಾಗಿದೆ.

ಶಾಲಾ ಸಂಕೇತ ಪಡೆಯಲು ನಿಗದಿಪಡಿಸಿದ ಕೊನೆಯ ದಿನಾಂಕ: ಅಕ್ಟೋಬರ್ 31. ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ **CCERF,CCEPF, CCERR, CCEPR, NSR** ಮತ್ತು **NSPR** ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕ ಅಕ್ಟೋಬರ್ 31 ಹಾಗೂ .100 ರಂತೆ ದಂಡ ಶುಲ್ಕ ಸಹಿತ ನವೆಂಬರ್ 11 ಕೊನೆಯ ದಿನಾಂಕವಾಗಿದೆ. 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (**NSR & NSPR**) ಎಂಎಸ್‌ಎ, ನಾಮಿನಲ್ ರೋಲ್ ಮತ್ತು ಸಂಬಂಧಿಸಿದ ದಾಖಲೆಗಳನ್ನು ಮಂಡಳಿಗೆ ಭೌತಿಕವಾಗಿ ಸಲ್ಲಿಸಲು ಕೊನೆಯ ದಿನಾಂಕ ನವೆಂಬರ್ 22 ಎಂದು ಮಂಡಳಿಯ ಪ್ರಕಟಣೆ ತಿಳಿಸಿದೆ.

ಪ್ರತಿ ಮಗ್ಗಕ್ಕೆ ಅಲ್ಲ ! ಪ್ರತಿ ಫಲಾನುಭವಿಗೆ !!

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)

ಸರ್ಕಾರದ ಆದೇಶ ಸಂಖ್ಯೆ ಆರ್‌ಡಿ 167 ಟಿಎನ್‌ಆರ್ 2019 ದಿನಾಂಕ 18-10-2019 ರಲ್ಲಿನ ಆದೇಶ ಭಾಗದ ಟೇಬಲ್ ನ ಕಲಂ 4 ರಲ್ಲಿ ರಾಜ್ಯ ಸರ್ಕಾರವು ಹಾನಿಯಾದ ಪ್ರತಿ ಮಗ್ಗಕ್ಕೆ ನಿಗದಿಪಡಿಸಿದ ಮೊತ್ತ ಎಂಬುದರ ಬದಲಾಗಿ ರಾಜ್ಯ ಸರ್ಕಾರವು ಹಾನಿಯಾದ ಮಗ್ಗದ ಪ್ರತಿ ಫಲಾನುಭವಿಯಾದ ಮಗ್ಗದ ಮಾಲೀಕರಿಗೆ ಎಂದು ತಿದ್ದಿ ಓದಿಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಿಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಕಾಲ ಹಾಗೂ ಕಾರ್ಮಿಕ ಸಚಿವರಾದ ಶ್ರೀ ಎಸ್. ಸುರೇಶ್ ಕುಮಾರ್ ಅವರು ಅಕ್ಟೋಬರ್ 26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಂದೇ ದಿನ ನಗರಕ್ಕೆ ಹಿಂದಿರುಗಲಿದ್ದಾರೆ.

## ದೀಪಾವಳಿ ಹಬ್ಬ : ನಿಯಮಗಳನ್ನು ಪಾಲಿಸಲು ಕರೆ

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ) :

ಭಾರತ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ 728/2015 ಕ್ಕೆ ಸಂಬಂಧಿಸಿದಂತೆ 2018 ರ ಅಕ್ಟೋಬರ್ 23, 30 ಮತ್ತು 31 ರ ತೀರ್ಪಿನಂತೆ ಸಾರ್ವಜನಿಕರು ದೀಪಾವಳಿ ಹಬ್ಬದ ಆಚರಣೆ ಸಂದರ್ಭದಲ್ಲಿ ಕಡ್ಡಾಯವಾಗಿ ಸಾರ್ವಜನಿಕ ಹಿತದೃಷ್ಠಿಯಿಂದ ಕೆಲವು ನಿಯಮಗಳನ್ನು ಪಾಲಿಸಬೇಕೆಂದು ಒಳಾಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ ರಜನೀಶ್ ಗೋಯಲ್ ಅವರು ಕರೆ ನೀಡಿದ್ದಾರೆ.

ವಾಯು ಮಾಲಿನ್ಯ, ಶಬ್ಧ ಮಾಲಿನ್ಯ ಮತ್ತು ಪಟಾಕಿ ಸಿಡಿಸಿದ ನಂತರದ ಘನ ತ್ಯಾಜ್ಯ ವಸ್ತುಗಳಿಂದ ಮಾಲಿನ್ಯ ಉಂಟಾಗುವುದರಿಂದ, ಸರಣಿ ಸ್ಫೋಟಕ ಪಟಾಕಿಗಳನ್ನು (Joined firecrackers (series rackers or laris)) ತಯಾರಿಸುವುದು, ಮಾರಾಟ ಮಾಡುವುದು ಮತ್ತು ಬಳಸುವುದನ್ನು ನಿಷೇಧಿಸಿದೆ.

ಸ್ಫೋಟಕ ಪಟಾಕಿಗಳನ್ನು ಅಧಿಕೃತವಾಗಿ ಪರವಾನಗಿ ಪಡೆದ ಮಾರಾಟಗಾರರು ಮಾತ್ರ ಮಾರಾಟ ಮಾಡುವುದು ಮತ್ತು ಅಧಿಕೃತವಾಗಿ ಪರವನಗಿ ಪಡೆದವರು ಸ್ಫೋಟಕ ಪಟಾಕಿಗಳನ್ನು ಈ ಆದೇಶಾನುಸಾರ ಮಾತ್ರ ಮಾರಾಟ ಮಾಡುವುದು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತು ಜಿಲ್ಲಾಡಳಿತದ ಎಲ್ಲಾ ಇಲಾಖೆಗಳು ಶಾಲಾ ಕಾಲೇಜುಗಳಲ್ಲಿ, ಸಾರ್ವಜನಿಕರಲ್ಲಿ ಪಟಾಕಿ ಸಿಡಿಸುವುದರಿಂದ ಉಂಟಾಗುವ ಅಪಾಯಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲಿವೆ.

ದೀಪಾವಳಿ ಹಬ್ಬದ ಸಂಬಂಧ ಅಕ್ಟೋಬರ್ 27 ರ ನರಕ ಚತುರ್ದರ್ಶಿ ಅಕ್ಟೋಬರ್ 28 ರ ಅಮಾವಾಸ್ಯೆ ದಿನದ ಲಕ್ಷ್ಮೀ ಪೂಜೆ, ಅಕ್ಟೋಬರ್ 29 ರ ಬಲಿಪಾಡ್ಯಮಿ ಹಬ್ಬದ ಸಂದರ್ಭದಲ್ಲಿ ಪಟಾಕಿಗಳನ್ನು ರಾತ್ರಿ 8–00 ಗಂಟೆಯಿಂದ 10–00 ಗಂಟೆಯವರೆಗೆ ಮಾತ್ರ ಪಟಾಕಿ ಸಿಡಿಸಲು ಅವಕಾಶವಿದೆ.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರು 14 ದಿನಗಳ ಕಾಲ ಅಂದರೆ, ದೀಪಾವಳಿ ಹಬ್ಬ ಆರಂಭವಾಗುವ 7 ದಿನಗಳ ಮೊದಲು ಮತ್ತು ದೀಪಾವಳಿ ಹಬ್ಬದ ನಂತರ ಏಳು ದಿನಗಳು ಪಟಾಕಿ ಸಿಡಿಸುವುದರ ಬಗ್ಗೆ ಮೇಲ್ವಿಚಾರಣೆ ಮಾಡುವುದು. ಎಲ್ಲಾ ಮಹಾನಗರ ಪಾಲಿಕೆಗಳು, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯ್ತಿ, ತಾಲ್ಲೂಕು ಪಂಚಾಯ್ತಿ , ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯತ್ತಿ, ಗ್ರಾಮ ಪಂಚಾಯಿತ್ತಿ ವ್ಯಾಪ್ತಿಗಳಲ್ಲಿ ಪಟಾಕಿಗಳನ್ನು ಸಾಮೂಹಿಕವಾಗಿ ಸಿಡಿಸುವ ಸಾಧ್ಯತೆ ಬಗ್ಗೆ ಪರಿಶೀಲಿಸುವುದು. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು Petroleum & Explosives Safety Orgnisation (PESO) ಸರ್ವೋಚ್ಚ ನ್ಯಾಯಾಲಯದ ದಿನಾಂಕ: 23/31–10–2018 ರ ಆದೇಶವನ್ನು ಪಾಲಿಸುವುದಕ್ಕೆ ಸೂಕ್ತ ಸಹಕಾರ ನೀಡುವುದು.

ಎಲ್ಲಾ ಇಲಾಖೆಗಳು ಪ್ರಮುಖವಾಗಿ ಪೊಲೀಸ್ ಇಲಾಖೆಯು ಪಟಾಕಿ ಸಿಡಿತ ಪ್ರಕ್ರಿಯೆಯು ನಿಗದಿತ ಅವಧಿಯಲ್ಲಿ ನಡೆಯುವಂತೆ ನೋಡಿಕೊಳ್ಳುವುದು. ಕಂಡಿಕೆ (1) ರ ಪ್ರಕಾರ ನಿಷೇಧಿತ ಸ್ಫೋಟಕ ಪಟಾಕಿಗಳ ಮಾರಾಟವನ್ನು ತಡೆಗಟ್ಟಲು ಕ್ರಮಕೈಗೊಳ್ಳುವುದು. ತಪ್ಪಿದಲ್ಲಿ ಸಂಬಂಧಿಸಿದ ಠಾಣಾಧಿಕಾರಿಗಳನ್ನು, ನ್ಯಾಯಾಲಯದ ಉಲ್ಲಂಘನೆಗಾಗಿ ತಪ್ಪಿತಸ್ಥರೆಂದು ನಿರ್ಧರಿಸಿ, ಕ್ರಮಗೊಳ್ಳಲಾಗುವುದು ಎಂದು ಡಾ ರಜನೀಶ್ ಗೋಯಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Deepavali Festival-2019 safety measures

To ensure an accident free Deepavali Festival-2019 Karnataka State Fire & Emergency Service Department suggests the following safety measures.

a) Allow the children to light fire works only under the supervision of adult members.
b) Do not light fire crackers inside the house but light them in an open space away from combustible materials.
c) Never wear loose, flowing clothes while lighting fire works.
d) Hold sparklers away from the body.
e) Never bend over the fire works while lighting them. Light them from the side.
f) Never light fire works under confinement in a metal container.
g) Never keep fire crackers in the pocket.
h) Never store fire works or unpack them near a flame or source of heat.
i) Never return to fire work once lit-it may explode or your face.
j) Never light a flower pot holding it in hand.

k) While lighting rocket like crackers, take precaution that it does not enter into an open window, door, open building, hut, etc. As for as possible avoid lighting of rockets.

l) Never take unnecessary risk while lighting fire works just to show off to your friends.

m) Keep a bucket of water handy while lighting fire works and in case of any burn injury immediately pour clean water on the burnt skin.

n) Get all your friends together and pool in your fire works. Light them in an open space. Have some adult to supervise the display. This way you will be able to enjoy many more types of fire works and it will also be safer and cheaper.

o) Show concern for infants, the aged, sick & animals. Do no light loud fire works near them or near Hospitals.

p) In case of any fire accident, members of public are requested to inform fire control room on 101 and in case of Bangalore City, apart from 101, Phone No's 080-22971500 or 080-22971600 can be also contacted.

## ದೀಪಾವಳಿ ಹಬ್ಬ ಮುಂಜಾಗರೂಕತ ಕ್ರಮ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ) :**

2019 ನೇ ಸಾಲಿನಲ್ಲಿ ದೀಪಾವಳಿ ಹಬ್ಬವನ್ನು ಸುರಕ್ಷಿತವಾಗಿ ಆಚರಿಸುವ ದಿಸೆಯಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯು ಈ ಕೆಳ ತೋರಿಸಿರುವ ಕ್ರಮಗಳನ್ನು ಸೂಚಿಸಿರುತ್ತದೆ.

ಅ) ಮಕ್ಕಳಿಗೆ ದೊಡ್ಡವರ ಸಮ್ಮುಖದಲ್ಲೆ ಪಟಾಕಿ ಹಚ್ಚಲು ತಿಳಿಸತಕ್ಕದ್ದು.

ಆ) ತೆರೆದ ಪ್ರದೇಶದಲ್ಲಿ ಪಟಾಕಿ ಹಚ್ಚುವುದು ಸುರಕ್ಷಿತ. ಯಾವುದೇ ಸಂದರ್ಭದಲ್ಲಿ ಮನೆಯೊಳಗೆ ಪಟಾಕಿ ಹಚ್ಚಬಾರದು.

ಇ) ಆದಷ್ಟು ಮಟ್ಟಿಗೆ ಶರೀರಕ್ಕೆ ಹೊಂದಿಕೊಳ್ಳುವಂತಹ ಬಟ್ಟೆಗಳನ್ನು ಧರಿಸತಕ್ಕದ್ದು. ದೊಗಲೆ ಬಟ್ಟೆಗಳನ್ನು ಧರಿಸಬಾರದು.

ಈ) ಸುರ ಸುರ ಬತ್ತಿ ಇತ್ಯಾದಿಗಳನ್ನು ಶರೀರದಿಂದ ಆದಷ್ಟು ದೂರ ಹಿಡಿಯಬೇಕು.

ಉ) ಪಟಾಕಿ ಹಚ್ಚುವಾಗ ಅದರ ಮೇಲೆ ಬಾಗಬಾರದು. ಸಾದ್ಯವಾದಷ್ಟು ಮಟ್ಟಿಗೆ ಪಕ್ಕದಿಂದ ಹಚ್ಚತಕ್ಕದ್ದು.

ಊ) ಯಾವುದೇ ಪಾತ್ರೆ ಒಳಗೆ ಅಥವಾ ಇಕ್ಕಟ್ಟಾದ ಸ್ಥಳಗಳಲ್ಲಿ ಪಟಾಕಿ ಹಚ್ಚಬಾರದು.

ಋ) ಪಟಾಕಿಗಳನ್ನು ಜೇಬಿನಲ್ಲಿಡಬಾರದು.

ಋೂ) ಯಾವುದೇ ಸಂದರ್ಭದಲ್ಲಿ ಪಟಾಕಿಗಳನ್ನು ಬೆಂಕಿಯ ಅಥವಾ ಉಷ್ಣತೆ ಹೆಚ್ಚಿರುವ ಸ್ಥಳಗಳಲ್ಲಿ ಇಡಬಾರದು ಹಾಗೂ ಪೊಟ್ಟಣಗಳನ್ನು ತೆರೆಯಬಾರದು.

ಎ) ಹಚ್ಚಿರುವ ಪಟಾಕಿ ಸಿಡಿಯದಿದ್ದರೆ ಅದನ್ನು ಪುನರ್ ಪರೀಕ್ಷಿಸಲು ಪ್ರಯತ್ನಿಸಬಾರದು.

ಏ) ಹೂ ಕುಂಡಗಳನ್ನು ಕೈಯಲ್ಲಿ ಹಿಡಿದುಕೊಂಡು ಹಚ್ಚಬಾರದು.

ಐ) ರಾಕೆಟ್‌ಗಳನ್ನು ಬಳಸುವುದನ್ನು ಪೂರ್ಣವಾಗಿ ತಪ್ಪಿಸುವುದು ಉತ್ತಮ.

ಒ) ಬೇರೆಯವರಿಗೆ ತೋರಿಸಿಕೊಳ್ಳಲು ಪಟಾಕಿ ಹಚ್ಚುವಾಗ ಅಪಾಯಕ್ಕೆ ಅವಕಾಶ ಕೊಡಬಾರದು.

ಓ) ಪಟಾಕಿ ಹಚ್ಚುವಾಗ ಯಾವಾಗಲೂ ಪಕ್ಕದಲ್ಲಿ ನೀರನ್ನು ಇಟ್ಟುಕೊಳ್ಳುವುದು ಸುರಕ್ಷಿತ. ಅಕಸ್ಮಿಕವಾಗಿ ಸುಟ್ಟ ಗಾಯಗಳಾದರೆ ಕೂಡಲೇ ತಣ್ಣೀರನ್ನು ಸುರಿಯತಕ್ಕದ್ದು.

ಔ) ಸಾಧ್ಯವಾದಷ್ಟು ಮಟ್ಟಿಗೆ ಸ್ನೇಹಿತರ ಜೊತೆ ಸೇರಿ ಸಾರ್ವಜನಿಕ ತೆರೆದ ಪ್ರದೇಶಗಳಲ್ಲಿ ಪಟಾಕಿ ಹಚ್ಚುವುದು ಸೂಕ್ತ. ಇದರಿಂದ ಎಲ್ಲರೂ ಸಂತೋಷ ಪಡಬಹುದು ಹಾಗೂ ಸುರಕ್ಷಿತ.

ಅಂ) ಪಟಾಕಿ ಹಚ್ಚುವಾಗ ಮಕ್ಕಳು, ವಯಸ್ಸಾದವರು, ಖಾಯಿಲೆ ಇರುವವರು ಹಾಗೂ ಪ್ರಾಣಿಗಳನ್ನು ಗಮನಿಸಿ, ಅವರಿಗೆ ಆಗುವ ತೊಂದರೆಗಳನ್ನು ತಪ್ಪಿಸಲು ಪ್ರಯತ್ನಿಸಿ. ಸಾಧ್ಯವಾದಷ್ಟು ಮಟ್ಟಿಗೆ ಹೆಚ್ಚು ಶಬ್ದ ಬರುವ ಪಟಾಕಿಗಳನ್ನು ಆಸ್ಪತ್ರೆ ಮತ್ತು ಇತರೆ ಸೂಕ್ಷ್ಮ ಪ್ರದೇಶಗಳಲ್ಲಿ ಬಳಸುವುದನ್ನು ತಪ್ಪಿಸಲು ಪ್ರಕಟಣೆ ತಿಳಿಸಿದೆ.

## ಅಂತಿಮ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ನಾಗರೀಕ ಸರಬರಾಜು ನಿಗಮ ನಿಯಮದಲ್ಲಿ 53+01ಹೈ.ಕ ಒಟ್ಟು 54 ಹಿರಿಯ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಅಂತಿಮ ಆಯ್ಕೆ ಪಟ್ಟಿಯ ಅಧಿಸೂಚನೆಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in.-Lists-Final selection list ರಡಿಯಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.**

## ರಾಷ್ಟ್ರೀಯ ಏಕತಾ ದಿನಾಚರಣೆ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

ಗುಜರಾತ್‌ನ ಕೆವಾದಿಯಾನಲ್ಲಿರುವ ಏಕತಾ ಶಿಲ್ಪದ ಪ್ರಾಂಗಣದಲ್ಲಿ ಅಕ್ಟೋಬರ್ 31 ರಂದು ಆಚರಿಸಲಿರುವ ರಾಷ್ಟ್ರೀಯ ಏಕತಾ ದಿನಾಚರಣೆಯ ಸಮಾರಂಭಕ್ಕೆ ರಾಜ್ಯದಿಂದ ಪೊಲೀಸ್ ಪಡೆಯನ್ನು ನಿಯೋಜಿಸಲು, ಭಾರತದ ಉಕ್ಕಿನ ಮನುಷ್ಯ ಎಂದೇ ಹೆಸರಾದ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಭಾವಚಿತ್ರವನ್ನು ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಪ್ರದರ್ಶಿಸಲು, ಅವರ ಹೆಸರಿನಲ್ಲಿ ಪ್ರತಿಜ್ಞಾ ವಚನವನ್ನು ಸ್ವೀಕರಿಸಿ ಹಾಗೂ ಕವಾಯತು ಪ್ರದರ್ಶನ ನಡೆಸಲು ಸೂಚಿಸಲಾಗಿದೆ.

ಅಂತೆಯೆ, ಕೇಂದ್ರ ಸರ್ಕಾರವು ಏಕತಾ ದಿನಾಚರಣೆಯ ಪ್ರಯುಕ್ತ ಎಲ್ಲಾ ಜಿಲ್ಲಾ ಘಟಕಗಳಲ್ಲಿ ಏಕತೆಗಾಗಿ ಓಟ ( ರನ್ ಫಾರ್ ಯೂನಿಟಿ ) ಕಾರ್ಯಕ್ರಮ ಹಮ್ಮಿಕೊಳ್ಳಲು ಸೂಚಿಸಿದೆ.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ) :

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ಅಕ್ಟೋಬರ್ 27 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕೋರಿದ್ದಾರೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8-00 ಗಂಟೆಯಿಂದ ಸಂಜೆ 5-00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

ಬೆಳಿಗ್ಗೆ 7-00 ಗಂಟೆಯಿಂದ ಬೆಳಿಗ್ಗೆ 8-00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶಮ್ಯ ಕೃಷ್ಣ ಮತ್ತು ತಂಡದವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ